ಆ) 1) ಲೆಕ್ಕ ಅಧೀಕ್ಷಕರು 1
2) ಕಛೇರಿ ವ್ಯವಸ್ಥಾಪಕರು 1
3) ಅಕೌಂಟೆಂಟ್ 1
4) ಹಿರಿಯ ಆರೋಗ್ಯ ನಿರೀಕ್ಷಕ 3
5) ಪ್ರಥಮ ದರ್ಜೆ ಸಹಾಯಕ 2
6) ಶೀಘ್ರಲಿಪಿಗಾರರು 2
7) ಪ್ರಥಮ ದರ್ಜೆ ಕಂದಾಯ ನಿರೀಕ್ಷಕರು 2
8) ಕಿರಿಯ ಆರೋಗ್ಯ ನಿರೀಕ್ಷಕ 3

ಇ) ಅಭಿಯಂತರರುಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪತ್ರಬರೆದು ಕ್ರಮವಹಿಸಲಾಗಿದೆ ಹಾಗೂ ಇತರೆ ಹುದ್ದೆಗಳನ್ನು ವರ್ಗಾವಣೆ ಮುಖಾಂತರ ಭರ್ತಿ ಮಾಡಲಾಗುತ್ತಿದೆ.

229 (22) : ಶ್ರೀ ಬೋಪಯ್ಯ, ಕೆ.ಜಿ. (ಮಡಿಕೇರಿ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮಡಿಕೇರಿ ನಗರದ ಕುಡಿಯುವ ನೀರಿನ ಸಮಸ್ಯೆಗೆ ಕಾವೇರಿ ನದಿಯ ಬೇತ್ರಿಯಿಂದ ನೀರು ಸರಬರಾಜು ಮಾಡಲು ಕೈಗೊಂಡ ಯೋಜನೆ ಯಾವ ಹಂತದಲ್ಲಿದೆ;

ಆ) ಕುಡಿಯುವ ನೀರಿನ ಸಮಸ್ಯೆಯ ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಎನ್. ಧರ್ಮಸಿಂಗ್ (ಮುಖ್ಯಮಂತ್ರಿಗಳು)

ಅ) ಮಡಿಕೇರಿ ನಗರಕ್ಕೆ ಕಾವೇರಿ ನದಿ ಮೂಲದಿಂದ ಕುಡಿಯುವ ನೀರು ಸರಬರಾಜು ಯೋಜನೆಯನ್ನು ರೂ. 15.00 ಕೋಟಿಗಳಿಗೆ ತಯಾರಿಸಿದ್ದು, ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಈ ಯೋಜನೆಗಾಗಿ ಆಯವ್ಯಯದಲ್ಲಿ ಸಾಕಷ್ಟು ಹಣ ಒದಗಿಸಿದ ಕೂಡಲೇ ಆಡಳಿತಾತ್ಮಕ ಅನುಮೋದನೆ ನೀಡಲಾಗುವುದು.

230 (882) : ಶ್ರೀ ಚಿಕ್ಕನಗೌಡರ ಸಿದ್ದನಗೌಡ ಈಶ್ವರಗೌಡ (ಕಲಘಟಗಿ) ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಧಾರವಾಡ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯ ವತಿಯಿಂದ ಕೈಗೆತ್ತಿಕೊಂಡಿರುವ ಕಾಮಗಾರಿಗಳು ಯಾವುವು (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು);

ಆ) ಇವುಗಳಲ್ಲಿ, ಕಲಘಟಗಿ ವಿಧಾನಸಭಾ ಕ್ಷೇತ್ರದ ಐದಾರು ಕಾಮಗಾರಿಗಳು ಹಣ ಬಿಡುಗಡೆಯಾಗದೇ ಸ್ಥಗಿತಗೊಂಡಿರುವ ಪ್ರಕರಣಗಳು ಜರುಗಿವೆಯೇ;

ಇ) ಇದಕ್ಕೆ ಕಾರಣಗಳೇನು;

ಈ) ಸದರಿ ಕಾಮಗಾರಿಗಳಿಗಾಗಿ ಈಗಾಗಲೇ ಬಿಡುಗಡೆಯಾದ ಮೊತ್ತವೆಷ್ಟು ಮತ್ತು ನಿಗದಿಪಡಿಸಿದ ಹಣವೆಷ್ಟು;